10

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಅ.ಆ/ಯ.ವ/ತಾ.ಅ/ 216 /2012–13.

ಕಾರ್ಯಪಾಲಕ ಅಭಿಯಂತರರ ಕಛೇರಿ
ಯಲಹಂಕ ವಲಯ ,ಬೃ.ಬೆಂ.ಮ.ಪಾ.
ಬೆಂಗಳೂರು –92
ದಿನಾಂಕ: 10/9/12

ತಾಂತ್ರಿಕ ಅನುಮೋದನೆ

ವಿಷಯ:– :– **Improvements to Roads and Drains at Balaji layout in ward no.8**

ಉಲ್ಲೇಖ:– 1)ಸಹಾಯಕ ನಿಯಂತ್ರಕರು(ಹಣಕಾಸು)ಯಲಹಂಕ ವಲಯರವರ ಕಾಮಗಾರಿ ಸಂಕೇತ ಕಾಮಗಾರಿ ಸಂಕೇತ: 008–12–000073

2) ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ: ಬೃ.ಬೆಂ.ಮ.ಪಾ./ಜಂ.ಅ/ ಆ.ಅ/ 542 / 12–13, ದಿನಾಂಕ: 10.09.12

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೊಡಿಗೇಹಳ್ಳಿ ಉಪ ವಿಭಾಗ) ರವರು 2012–13ನೇ ಸಾಲಿನ **ಕೆ.ಪಿ.ಡಬ್ಲ್ಯೂ.ಡಿ. ಎಸ್.ಆರ್,** ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯ, ವಾರ್ಡ್ ಸಂಖ್ಯೆ 8 ರಲ್ಲಿ 2011–12ನೇ ಸಾಲಿನ **Development works for Bangalore City (P2434) ಅನುದಾನದಡಿಯಲ್ಲಿ** ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ. 10.00 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಉಲ್ಲೇಖ (1) ರಂತೆ ಕಾಮಗಾರಿ ಸಂಕೇತ ಹಾಗೂ ಉಲ್ಲೇಖ (2) ರಂತೆ ಜಂಟಿ ಆಯುಕ್ತರು ಆಡಳಿತಾತ್ಮಕ ಅನುಮೋದನೆ ನೀಡಿರುವುದರಿಂದ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011–12 ದಿನಾಂಕ:13–03–2012ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 17 ಕ್ರ.ಸಂ 216 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
3. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೇಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
6. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
7. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
8. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
9. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ–ಬಿಎಂ–ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರ
HSP ಯಲಹಂಕ ವಲಯ
ಬಿ.ಬಿ.ಎಂ.ಪಿ, ಬೆಂಗಳೂರು–92.

ಪ್ರತಿಯನ್ನು:

1. ಮಾನ್ಯ ಜಂಟಿ ಆಯುಕ್ತರು, ಬಿ.ಬಿ.ಎಂ.ಪಿ ಯಲಹಂಕ ವಲಯರವರ ಮಾಹಿತಿಗಾಗಿ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.